- 10 -
ಅ.ದಾ. ಸಂಖ್ಯೆ : 279/2023
ಪಿ..ಡಬ್ಲ್ಯೂ -01

**ದಿನಾಂಕಃ 28-10-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ವಾಟೀಸಾಲು :- ಪ್ರತಿವಾದಿಯ ಪರ ಶ್ರೀ. ಕೆ ಎಸ್ ಪಿ ವಕೀಲರಿಂದ :-**

ಯಾರ ವಿರುದ್ದ ದಾವೆಯನ್ನು ಸಲ್ಲಿಸಿರುತ್ತೀರಿ ಎಂದರೆ ಸಾಕ್ಷಿ ಪುಟ್ಟರೇವಕ್ಕ ಎಂದು ನುಡಿಯುತ್ತಾರೆ. ಪುಟ್ಟರೇಕ್ಕ ರವರ ವಿರುದ್ದ ಮಾತ್ರ ದಾವೆ ಸಲ್ಲಿಸಿರುತ್ತೀರಾ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ದಾವಾಸ್ವತ್ತಿನ ಸರ್ವೆ ನಂಬರ್ ಮತ್ತು ವಿಸ್ತೀರ್ಣ ಏನು ಎಂದರೆ ಸಾಕ್ಷಿ ಸರ್ವೆ ನಂ.65/13 ವಿಸ್ತೀರ್ಣ 1 ಎಕರೆ 29 ಗುಂಟೆ ಎಂದು ನುಡಿಯುತ್ತಾರೆ. ದಾವಾಸ್ವತ್ತಿನ ಚೆಕ್ಕುಬಂಧಿ ಏನು ಎಂದರೆ ಸಾಕ್ಷಿ ಚೆಕ್ಕುಬಂಧಿ ಗೊತ್ತು ಆದರೆ ಮರೆತಿರುತ್ತೇನೆ ಎಂದು ನುಡಿಯುತ್ತಾರೆ. ಈ ಹಿಂದೆ ಪುಟ್ಟರೇವಕ್ಕ ರವರು ಸಲ್ಲಿಸಿದ್ದ ದಾವೆಯ ದಾವಾಸ್ವತ್ತು ಹಾಗೂ ಪ್ರಸ್ತುತ ದಾವೆಯ ದಾವಾಸ್ವತ್ತು ಒಂದೇನಾ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಯಾವ ಕಾರಣಕ್ಕಾಗಿ ದಾವೆ ಸಲ್ಲಿಸಿರುತ್ತೀರಿ ಎಂದರೆ ಸಾಕ್ಷಿ ಪ್ರತಿವಾದಿಗಳು ಜಮೀನಿಗೆ ಬಂದು ಗಲಾಟೆ ಮಾಡಿದ್ದರಿಂದ ಎಂದು ನುಡಿಯುತ್ತಾರೆ. ಈ ಹಿಂದೆ 1ನೇ ಪ್ರತಿವಾದಿಯು ಸಲ್ಲಿಸಿದ್ದ ದಾವೆಯು ವಜಾ ಆಗಿತ್ತು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಸದರಿ ದಾವೆಯು ವಜಾ ಆದ ನಂತರ ನೀವು ಸ್ವತ್ತಿನ ಸ್ವಾಧೀನಕ್ಕೆ ಹೋಗಿರುತ್ತೀರಿ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ.

ನೀವು ಮತ್ತು ಪ್ರತಿವಾದಿಗಳು ದೊಡ್ಡಪ್ಪ ಚಿಕ್ಕಪ್ಪ ರವರ ಮಕ್ಕಳು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. 1 ನೇ ಪ್ರತಿವಾದಿಯ ಗಂಡ ಪುಟ್ಟರೇವಣ್ಣ ನಿಮಗೆ ಏನು ಆಗಬೇಕು ಎಂದರೆ ಸಾಕ್ಷಿ ದೊಡ್ಡಪ್ಪ ಎಂದು ನುಡಿಯುತ್ತಾರೆ. ನಿಮ್ಮ ತಂದೆಯವರು ದಾವಾಸ್ವತ್ತಿಗೆ ಸಂಬಂಧಪಟ್ಟಂತೆ ಸದರಿ ಪುಟ್ಟರೇವಣ್ಣ ರವರಿಗೆ ಬರೆದುಕೊಟ್ಟ ಕ್ರಯದ ಕರಾರುಪತ್ರದ ಬಗ್ಗೆ ಗೊತ್ತಿದೆಯೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಸದರಿ ಕರಾರುಪತ್ರ ಆಗುವ ಸಮಯದಲ್ಲಿ ನೀವು ಅಪ್ರಾಪ್ತ ವಯಸ್ಕರು ಎಂದರೆ ಸಾಕ್ಷಿ ಹೌದು 15-16 ವರ್ಷ ಆಗಿತ್ತು ಎಂದು ನುಡಿಯುತ್ತಾರೆ.

ದಾವಾಸ್ವತ್ತು ಸರ್ಕಾರದಿಂದ ನಿಮ್ಮ ತಂದೆಯವರಿಗೆ ಮಂಜೂರು ಆಗಿತ್ತು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ದಾವಾಸ್ವತ್ತು ನಿಮ್ಮ ತಂದೆಯವರಿಗೆ ಮಂಜೂರಾದ ದಿನದಿಂದಲೂ ಅಲ್ಲೆ ವಾಸ ಇದ್ದಿದ್ದು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಪ್ರತಿವಾದಿಗಳು ತಟ್ಟೆಕೆರೆಯಲ್ಲಿ ವಾಸ ಇದ್ದಿದ್ದು ಎಂದರೆ ಸಾಕ್ಷಿ ಹೌದು ಎಂದು ನಡುಯುತ್ತಾರೆ. 1 ನೇ ಪ್ರತಿವಾದಿಯು ನಿಮಗೆ ಏನು ಆಗಬೇಕು ಎಂದರೆ ಸಾಕ್ಷಿ ದೊಡ್ಡಮ್ಮ ಎಂದು ನುಡಿಯುತ್ತಾರೆ. ನಿಮ್ಮ ತಂದೆಯವರು ದಾವಾಸ್ವತ್ತಿನ ಮಾಲೀಕರು ಆಗಿದ್ದರು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ದಿನಾಂಕ 23.04.1990 ರಲ್ಲಿ ನಿಮ್ಮ ತಂದೆಯವರು ಪುಟ್ಟರೇವಣ್ಣರವರಿಗೆ ಸ್ವಾಧೀನ ಸಹಿತ ಕ್ರಯದ ಕರಾರುಪತ್ರವನ್ನು ಬರೆದುಕೊಟ್ಟಿದ್ದು ಅಂದಿನಿಂದಲೂ ಅವರೇ ಸ್ವಾಧೀನದಲ್ಲಿ ಇದ್ದಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಈಗಲೂ ದಾವಾಸ್ವತ್ತಿನಲ್ಲಿ ಪ್ರತಿವಾದಿಗಳೆ ಸ್ವಾಧೀನ ಇದ್ದಾರೆ ಎಂದರೆ ಸಾಕ್ಷಿ ಇಲ್ಲ ನಾವು ಇದ್ದೇವೆ ಎಂದು ನುಡಿಯುತ್ತಾರೆ. ನೀವು ದಾವಾಸ್ವತ್ತಿನಲ್ಲಿ ಸ್ವಾಧೀನ ಇರುವುದರ ಸಂಬಂಧ ದಾಖಲೆ ಗಳನ್ನು ಕೊಟ್ಟಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನೀವು ಸ್ವಾಧೀನದಲ್ಲಿ ಇರುವುದಿಲ್ಲ ಆ ಕಾರಣದಿಂದ ಯಾವುದೇ ದಾಖಲೆಗಳನ್ನು ಕೊಟ್ಟಿರುವುದಿಲ್ಲ ಎಂದರೆ ಸಾಕ್ಷಿ ಪೋಟೋ ಕೊಟ್ಟಿರುತ್ತೇವೆ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ಗಲಾಟೆ ಮಾಡಿರುವ ಸಂಬಂಧ ಪೋಲಿಸ್ ಠಾಣೆಯಲ್ಲಿ ದೂರು ಕೊಟ್ಟಿರುತ್ತೀರಾ ಎಂದರೆ ಸಾಕ್ಷಿ ಕೊಟ್ಟಿರುತ್ತೇವೆ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ಸಹ ನಿಮ್ಮ ವಿರುದ್ದ ಪೋಲಿಸ್ ಠಾಣೆಯಲ್ಲಿ ದೂರನ್ನು ಕೊಟ್ಟಿದ್ದರು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ.

ದಾವಾಸ್ವತ್ತಿಗೆ ಸಂಬಂಧಪಟ್ಟಂತೆ ತಹಸಿಲ್ದಾರ್ ನ್ಯಾಯಾಲಯದಲ್ಲಿ ಕೇಸು ಇತ್ತು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ನೀವು ಮತ್ತು ಪ್ರತಿವಾದಿಗಳು ದೂರನ್ನು ಕೊಟ್ಟ ನಂತರ ಕುದೂರು ಪೋಲಿಸ್ ಠಾಣೆಯವರು ದಾವಾಸ್ವತ್ತಿನಲ್ಲಿ ಯಾರು ಸ್ವಾಧೀನದಲ್ಲಿ ಇದ್ದಾರೆ ಎಂದು ವರಧಿ ಕೊಡುವಂತೆ ತಹಸಿಲ್ದಾರ್ ರವರಿಗೆ ತಿಳಿಸಿದ್ದರು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಅದಕ್ಕೆ ಸಂಬಂಧಪಟ್ಟಂತೆ ತಹಸಿಲ್ದಾರ್ ಕಛೇರಿಯಿಂದ ಯಾರು ಸ್ವಾಧೀನದಲ್ಲಿ ಇದ್ದಾರೆ ಎಂದು ಸ್ಥಳ ಮಹಜರನುನ ಜರುಗಿಸಿರುತ್ತಾರೆ ಎಂದರೆ ಸಾಕ್ಷಿ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ದಾವಾಸ್ವತ್ತಿನಲ್ಲಿ ಸ್ವಾಧೀನ ಇದ್ದಾರೆ ಎಂದು ಕಂದಾಯ ಇಲಾಖೆಯವರು ಕುದೂರು ಪೋಲಿಸ್ ಠಾಣೆಯವರಿಗೆ ವರಧಿಯನ್ನು ಕೊಟ್ಟಿರುತ್ತಾರೆ ಎಂದರೆ ಸಾಕ್ಷಿ ನಮಗೆ ತಿಳಿಸಿರುವುದಿಲ್ಲ ಎಂದು ನುಡಿಯುತ್ತಾರೆ. ಸ್ಥಳ ತನಿಖೆಗಾಗಿ ಕಂದಾಯ ಇಲಾಖೆಯವರು ನಿಮಗೆ ಮಾಹಿತಿಯನ್ನು ಕೊಟ್ಟಿದ್ದರೂ

ಸಹ ನೀವು ಬಂದಿರುವುದಿಲ್ಲ ಎಂದರೆ ಸಾಕ್ಷಿ ಮಾಹಿತಿಯನ್ನು ಕೊಟ್ಟಿರುವುದಿಲ್ಲ ಎಂದು ನುಡಿಯುತ್ತಾರೆ. ತಹಸಿಲ್ದಾರ್ ರವರು ಪ್ರತಿವಾದಿಗಳು ಸ್ವಾಧಿನದಲ್ಲಿ ಇದ್ದಾರೆ ಎಂದು ಕೊಟ್ಟ ವರಧಿಯನ್ನು ನೀವು ಪ್ರಶ್ನಿಸಿರುವುದಿಲ್ಲ ಎಂದರೆ ಸಾಕ್ಷಿ ನಮಗೆ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ಮಹಜರ್ ವರಧಿಯನ್ನು ನೀವು ಪಡೆದುಕೊಂಡಿರುತ್ತೀರಾ ಎಂದರೆ ಸಾಕ್ಷಿ ನಮಗೆ ಗೊತ್ತೆ ಇರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ಮಹಜರ್ ನಲ್ಲಿ ನೀವು ದಾವಾಸ್ವತ್ತಿನ ಸ್ವಾಧೀನ ಇರುವುದಿಲ್ಲ ಎಂದು ಹೇಳಿದ್ದು ನೀವು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ಮಹಜರ್ ವರಧಿಯನ್ನು ಮರೆಮಾಚಿ ದಾವೆ ಸಲ್ಲಿಸಿರುತ್ತೀರಿ ಎಂದರೆ ಸಾಕ್ಷಿ ಸದರಿ ಮಹಜರ್ ಬಗ್ಗೆ ನಮಗೆ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ನೀವು ಸದರಿ ಮಹಜರ್ ದಾಖಲೆಯನ್ನು ಪಡೆದಿದ್ದು ಸದರಿ ಮಹಜರ್ ಅನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದರೆ ನಿಮಗೆ ಅನಾನುಕೂಲವಾಗುತ್ತದೆ ಎಂದು ಗೊತ್ತಿರುವುದಿಲ್ಲ ಎಂದು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ.

ಈ ಹಂತದಲ್ಲಿ **ಪ್ರತಿವಾದಿಯ ಪರ ವಕೀಲರು ಮುಂದುವರೆದ ವಾಟೀಸವಾಲಿಗೆ ಸಮಯ ಕೋರಿದ್ದರಿಂದ, ಸಮಯ ನೀಡಿ ಮುಂದುವರೆದ ವಾಟೀಸವಾಲಿಗೆ ಮುಂದೂಡಲಾಯಿತು.**

ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,

ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ.
ಮಾಗಡಿ.